# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 17.05.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀಮತಿ ಕಮಲ | ನೋಡಲ್ ಅಧಿಕಾರಿ-ವಾರ್ಡ್ ನಂ.70 |
| 3 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 4 | ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 |
| 5 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 6 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) |
| 7 | ಕುಮಾರ ಆರ್ ಬಿ | ಸ್ವಯಂ ಸೇವಕರು |
| 8 | ಡಾ.ಎಂ.ಎಲ್ ರವಿಕುಮಾರ್ | ಎಂ.ಓ.ಎಚ್ |
| 9 | ಡಾ.ಸುಷ್ಮಿತ ಎನ್ | ಕೋವಿಡ್-19 ವೈದ್ಯಾಧಿಕಾರಿ |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **<u>ಕೋವಿಡ್-19, ಸಾಂಕ್ರಾಮಿಕ ರೋಗದ ಬಗ್ಗೆ</u>**.

  - ವಾರ್ ರೂಂ ಮತ್ತು Triage Center ಗಳನ್ನು ಸ್ಥಾಪಿಸಲು ಸರ್ಕಾರಿ ಪ್ರೌಢಶಾಳೆಯ ಕಟ್ಟಡವನ್ನು ಗುರುತಿಸಿದ್ದು, ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಿಸರುವುದಾಗೀ ಸಹಾಯಕ ಅಭಿಯಂತರರು ತಿಳಿಸಿದ್ದು, ವೈದ್ಯರು ಮತ್ತು ವೈದ್ಯಕೀಯ ಉಪಕರಣಗಳು ಒದಗಿಸಿದಲ್ಲಿ ಕೂಡಲೇ ಕೇಂದ್ರಗಳನ್ನು ಕಾರ್ಯಾರಂಭ ಮಾಡಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು.

- ಕೋವಿಡ್ ಕೇರ್ ಕೇಂದ್ರ ಸ್ಥಾಪಿಸಲು ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಸರ್ಕಾರಿ ಕಟ್ಟಡ, ಸಮುದಾಯ ಭವನಗಳ ಇಲ್ಲದಿರುವುದರಿಂದ ಪಕ್ಕದ ವಾರ್ಡ್‌ಗಳಲ್ಲಿ ವಸತಿ ಗೃಹಗಳನ್ನು ಗುರುತಿ, ಕಂದಾಯ ಅಧಿಕಾರಿರವರಿಗೆ ಸೂಚಿಸಲಾಯಿತು.

- ಸ್ವಯಂ ಸೇವಕರ ಪೈಕಿ ಇಬ್ಬರ ಹಾಜರಿದ್ದು, ಕೇಂದ್ರಗಳು ಪ್ರಾರಂಭವಾದ ಕೂಡಲೇ ಕಾರ್ಯಪ್ರವೃತ್ತರಾಗಲು ಸೂಚಿಸಿದರು.
- ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ-ವಾರ್ಡ್ ನಂ.71, ರವರು ವಾರ್ಡ್ ಸಮಿತಿ ಸದಸ್ಯರಲ್ಲಿ ಹೆಚ್ಚಿನ ಸಂಖ್ಯೆ ಸ್ವಯಂ ಸೇವಕರನ್ನು ಗುರುತಿಸಿ ನೋಂದಾಯಿಸಲು ಕೋರಲಾಯಿತು.
- ವಾರ್ ರೂಂ ಮತ್ತು Triage Center ಕೇಂದ್ರಗಳಲ್ಲಿ Ambulance ಒದಗಿಸಲು ಸಂಬಂಧಪಟ್ಟವರಲ್ಲಿ ಕೋರಲು ತೀರ್ಮಾನಿಸಲಾಯಿತು.

**ವಾರ್ಡ್ ನಂ.71ರ ವ್ಯಾಪ್ತಿಯಲ್ಲಿ ಕೋವಿಡ್-19 ಸಂಬಂಧಪಟ್ಟ ವಿವರಗಳನ್ನು ಸಭೆಯಲ್ಲಿ ತಿಳಿಸಲಾಯಿತು. ಸದರಿ ವಿವರ ಈ ಕೆಳಕಂಡಂತಿದೆ.**

| |
|---|
| NO OF RT-PCR TESTED FROM 1/04/2021 = 6054 |
| NO OF +VES IN RT-PCR = 1754 |
| NO OF RAPID ANTIGEN TEST DONE FROM 1/04/2021 = 652 |
| NO OF +VES IN RAPID ANTIGEN TEST = 301 |
| NO OF VACCINATED FROM 18/01/2021 = 4652 |
| NO OF HOME ISOLATED = 1517 |
| NO OF HOSPITALIZED = 317 |
| NO OF MEDICAL KITS DISTRIBUTED FROM 1/05/2021 = 568 |
| NO OF STAMPED = 77 |

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ಕೋವಿಡ್-19 ಸಾಂಕ್ರಾಮಿಕವನ್ನು ವಾರ್ಡ್ ಮಟ್ಟದಲ್ಲಿಯೇ ಪರಿಹರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಮಂಜುನಾಥ್ ಡಿ ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ-ವಾರ್ಡ್ 71 ಹಾಗೂ**
**ಸಹಾಯಕ ಅಭಿಯಂತರರು,**

**(ಬಿ.ಆರ್ ರವಿಕುಮಾರ್)**
**ನೋಡಲ್ ಅಧಿಕಾರಿ ವಾರ್ಡ್-71**

ಪ್ರತಿಯನ್ನು:
1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.

5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ